RNU AIR DHARWAD

# JANUARY 24, 2025
# ALL INDIA RADIO- DHARWAD
# PRADESH SAMACHARA (KANNADA) 7:05 AM

- ಆಕಾಶವಾಣಿ ಮತ್ತು ದೂರದರ್ಶನ ಕೇಂದ್ರಗಳ ಉನ್ನತೀಕರಣಕ್ಕೆ ಕ್ರಮ–ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಡಾ.ಎಲ್.ಮುರುಗನ್.

- ಸಾವಯವ ಉತ್ಪನ್ನಗಳ ಮಾರಾಟಕ್ಕೆ ಎಪಿಎಂಸಿಯಲ್ಲಿ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಲು ಚಿಂತನೆ–ಮುಖ್ಯಮಂತ್ರಿ ಸಿದ್ದರಾಮಯ್ಯ.

- ಈ ವರ್ಷದ ಬೇಸಿಗೆಯಲ್ಲಿ, ರಾಜ್ಯದಲ್ಲಿ ಯಾವುದೇ ಲೋಡ್ ಶೆಡ್ಡಿಂಗ್ ಇಲ್ಲ– ಇಂಧನ ಸಚಿವ ಕೆ.ಜೆ.ಜಾರ್ಜ ಭರವಸೆ.

- ಮೈಕ್ರೋ ಫೈನಾನ್ಸ್‌ಗಳನ್ನು ನಿಯಂತ್ರಿಸುವಲ್ಲಿ ರಾಜ್ಯ ಸರ್ಕಾರ ವಿಫಲ– ಮಾಜಿ ಮುಖ್ಯಮಂತ್ರಿ, ಬಸವರಾಜ ಬೊಮ್ಮಾಯಿ ಆರೋಪ.

ಈಗ ವಾರ್ತೆಗಳ ವಿವರ

*******

ಪ್ರಸ್ತುತ ದಿನಮಾನಕ್ಕೆ ತಕ್ಕಂತೆ ಆಕಾಶವಾಣಿ ಮತ್ತು ದೂರದರ್ಶನ ಕೇಂದ್ರಗಳನ್ನು ಉನ್ನತೀಕರಿಸಲಾಗುತ್ತಿದೆ ಎಂದು ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಡಾ.ಎಲ್.ಮುರುಗನ್ ಹೇಳಿದ್ದಾರೆ. ಭದ್ರಾವತಿ ಆಕಾಶವಾಣಿಯ 10 ಕಿಲೋ ವ್ಯಾಟ ಸಾಮರ್ಥ್ಯದ ಎಫ್‌ಎಂ ಟ್ರಾನ್ಸ್ ಮಿಟರ್ ಅಳವಡಿಕೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಉನ್ನತೀಕರಣಕ್ಕೆ ಅಗತ್ಯವಾದ ಹಣಕಾಸಿನ ನೆರವನ್ನು ಕೇಂದ್ರ ನೀಡುತ್ತಿದೆ ಎಂದರು.

ಧ್ವನಿ– ಡಾ.ಮುರುಗನ್–37 ಸೆಕೆಂಡ್ಸ್

ಸಂಸದರ ನಿರಂತರ ಪ್ರಯತ್ನದ ಫಲವಾಗಿ ಮರು ಪ್ರಸಾರ ಟ್ರಾನ್ಸ್ ಮೀಟರ್ ಸ್ಥಾಪನೆ ಸಾಧ್ಯವಾಗಿದೆ. ಇಲ್ಲಿ ಪ್ರತ್ಯೇಕ ಸ್ಟುಡಿಯೋ ಸ್ಥಾಪಿಸಲಾಗುತ್ತಿದ್ದು, ಕೇಂದ್ರ ಸರ್ಕಾರ ಅಗತ್ಯ ನೆರವು ನೀಡಲಿದೆ ಎಂದರು. ಶಿವಮೊಗ್ಗದ ಈ ಕೇಂದ್ರ 20 ಕಿ.ಮೀ

ಪ್ರಸಾರ ವ್ಯಾಪ್ತಿ ಹೊಂದಿದ್ದು, ಸರ್ಕಾರದ ಯೋಜನೆ, ಮಾಹಿತಿ ಹಂಚಿಕೆ, ಸ್ಥಳೀಯ ಕಲೆ, ಸಂಸ್ಕೃತಿಯನ್ನು ಉಳಿಸಿ ಬೆಳೆಸುವಲ್ಲಿ ಪ್ರಮುಖ ಪಾತ್ರವಹಿಸಲಿದೆ ಎಂದು ಸಚಿವರು ಹೇಳಿದರು.

*******

ಮುಂದಿನ ಆರ್ಥಿಕ ವ ್ಷದಿಂದ ರಾಜ್ಯದ ಸಾವಯವ ಉತ್ಪನ್ನಗಳ ಮಾರಾಟಕ್ಕೆ ಎಪಿಎಂಸಿಯಲ್ಲಿ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಲು ಚಿಂತನೆ ನಡೆದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನ ತ್ರಿಪುರವಾಸಿನಿ ಅರಮನೆ ಮೈದಾನದಲ್ಲಿ ಆಯೋಜನೆಗೊಂಡಿರುವ ಅಂತರಾಷ್ಟ್ರೀಯ ಸಾವಯವ ಮತ್ತು ಸಿರಿಧಾನ್ಯ ಮೇಳ ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ದೇಶದಲ್ಲಿ ಹಿಂದಿನಿಂದಲೂ ಸಿರಿಧಾನ್ಯಗಳನ್ನು ಬೆಳೆಯಲಾಗುತ್ತಿದೆ. ಪ್ರಸ್ತುತ ಭಾರತ ಸಾವಯವ ಕೃಷಿ ಉತ್ಪಾದನೆಯಲ್ಲಿ ವಿಶ್ವದಲ್ಲಿ ಎರಡನೇ ಸ್ಥಾನದಲ್ಲಿದೆ ಎಂದರು.

ಮಂಡ್ಯ ಜಿಲ್ಲೆಯಲ್ಲಿ ಸ್ವಾಯತ್ತ ಕೃಷಿ ವಿಶ್ವವಿದ್ಯಾಲಯ ಸ್ಥಾಪನೆಗೆ ತೀರ್ಮಾನಿಸಲಾಗಿದೆ. ಇದರಿಂದ ಮಂಡ್ಯ, ಹಾಸನ, ಮೈಸೂರು, ಚಾಮರಾಜನಗರ ರೈತರಿಗೆ ಅನುಕೂಲವಾಗಲಿದ್ದು, ರೈತರು ಹೊಸ ತಳಿಯ ಪರಿಚಯ ಅತ್ಯಾಧುನಿಕ ತಾಂತ್ರಿಕ ಸಲಹೆಗಳನ್ನು ಪಡೆಯಬಹುದು ಎಂದು ಮುಖ್ಯಮಂತ್ರಿ ಹೇಳಿದರು.

*******

ಈ ವರ್ಷದ ಬೇಸಿಗೆಯಲ್ಲಿ, ರಾಜ್ಯದಲ್ಲಿ ಯಾವುದೇ ಲೋಡ್ ಶೆಡ್ಡಿಂಗ್ ಮಾಡುವುದಿಲ್ಲ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ ಭರವಸೆ ನೀಡಿದ್ದಾರೆ. ಬೀದರ ಜಿಲ್ಲಾ ಪಂಚಾಯತ ಸಭಾ ಭವನದಲ್ಲಿ ಜರುಗಿದ ಇಂಧನ ಇಲಾಖೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಸಧ್ಯ ದಿನಕ್ಕೆ 16 ರಿಂದ 17 ಸಾವಿರ ಮೆಗಾವ್ಯಾಟ್ ವಿದ್ಯುತ್ ಬೇಡಿಕೆಯಿದೆ. ಬೇಸಿಗೆಯಲ್ಲಿ ಬೇಡಿಕೆ ಹೆಚ್ಚಾದರೆ ವಿದ್ಯುತ್ ಖರೀದಿಗೂ ಸಹ ಸರ್ಕಾರ ಸಿದ್ಧವಿದೆ. ಎಂದರು. ಲೈನ್‌ಮೆನ್‌ಗಳ ಕೊರತೆ ನೀಗಿಸಲು ಏಪ್ರಿಲ್ ಅಂತ್ಯದೊಳಗೆ 3 ಸಾವಿರ ಲೈನ್‌ಮನ್‌ಗಳನ್ನು ನೇಮಕ ಮಾಡಲಾಗುವುದು. ರೈತರ ಟ್ರಾನ್ಸಫಾರ್ಮರ್ ರಿಪೇರಿ, ಸಾಗಾಟ, ವಿದ್ಯುತ್ ತಂತಿ, ಕಂಬ ದುರಸ್ತಿ ಸಂಪರ್ಕ ಸೇರಿದಂತೆ ವಿವಿಧ ವಿದ್ಯುತ್ ಸಮಸ್ಯೆಗಳಿಗೆ ಅಧಿಕಾರಿಗಳು ತಕ್ಷಣ ಸ್ಪಂಧಿಸಿ ಸಮಸ್ಯೆ ಪರಿಹರಿಸಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

*******

ಹೃದಯಾಘಾತ ಸಂಭವಿಸಿದ ಸಂದರ್ಭದ ಗೋಲ್ಡನ್ ಹವರ್‌ನಲ್ಲಿ ಜೀವರಕ್ಷಕ ಚುಚ್ಚುಮದ್ದು ನೀಡುವ ಪುನೀತ್ ರಾಜ್‌ಕುಮಾರ್ ಹೃದಯ ಜ್ಯೋತಿ ಯೋಜನೆಯನ್ನು ರಾಜ್ಯದ ಎಲ್ಲಾ ತಾಲೂಕು ಆಸ್ಪತ್ರೆಗಳಿಗೂ ವಿಸ್ತರಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾದ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ರಾಮನಗರ ತಾಲೂಕಿನ ಬಿಡದಿ ಹೋಬಳಿಯ ಮಂಚೇಗೌಡನ ಪಾಳ್ಯದಲ್ಲಿ ನಿರ್ಮಿಸಲಾಗಿರುವ ನೂತನ ಪ್ರಾಥಮಿಕ ಆರೋಗ್ಯ ಕೇಂದ್ರ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಈ ಯೋಜನೆಯನ್ನು ಮುಂಬರುವ ಎರಡು ತಿಂಗಳಲ್ಲಿ ರಾಜ್ಯಾದ್ಯಂತ ವಿಸ್ತರಿಸಲಾಗುವುದು ಎಂದರು.

ರಾಜ್ಯ ಸರ್ಕಾರ ಮತ್ತೊಂದು ಮಹತ್ವಾಕಾಂಕ್ಷೆ ಗೃಹ ಆರೋಗ್ಯ ಯೋಜನೆ. ರೂಪಿಸಿದ್ದು, ಪ್ರತಿಯೊಂದು ಮನೆಗೆ ತೆರಳಿ ಮನೆಯ ಸದಸ್ಯರ ಸಂಪೂರ್ಣ ಆರೋಗ್ಯ ತಪಾಸಣೆ ನಡೆದಲಾಗುವುದು ಎಂದು ಸಚಿವರು ಹೇಳಿದರು.

*******

ಮೈಕ್ರೋ ಫೈನಾನ್ಸ್‌ಗಳನ್ನು ನಿಯಂತ್ರಿಸುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಮಾಜಿ ಮುಖ್ಯಮಂತ್ರಿ, ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೈಕ್ರೋ ಫೈನಾನ್ಸ್‌ಗಳ ಕಿರುಕುಳದಿಂದಾಗಿ ಬಹಳ ಷ್ಟು ಕುಟುಂಬಗಳು ಮನೆ ಬಿಟ್ಟು ಹೋಗಿವೆ, ಹಲವು ಆತ್ಮಹತ್ಯೆ ಮಾಡಿಕೊಳ್ಳುವಂತೆ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು. ಹೆಚ್ಚು ಬಡ್ಡಿ ವಸೂಲಿ ಮಾಡುವವರ ನಿಯಂತ್ರಣಕ್ಕೆ ತಂದಿರುವ ಕಾನೂನು ನ್ಯಾಯಾಲಯದಲ್ಲಿ ರದ್ದಾಗಿದ್ದು, ಸರ್ಕಾರ ಕೂಡಲೇ ಈ ಆದೇಶ ತೆರವುಗೊಳಿಸಲು ಕ್ರಮ ಕೈಗೊಂಡು, ಮೈಕ್ರೋ ಫೈನಾನ್ಸ್‌ಗಳನ್ನು ನಿಯಂತ್ರಿಸಬೇಕು ಎಂದು ಬೊಮ್ಮಾಯಿ ಆಗ್ರಹಿಸಿದರು.

*******

ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಒತ್ತಡಕ್ಕೆ ಮಣಿದು ಲೋಕಾಯುಕ್ತ ಸಂಸ್ಥೆ ಕ್ಲೀನ್ ಚಿಟ್ ಕೊಟ್ಟಿರುವ ಸಾಧ್ಯತೆಯಿದ್ದು, ಇದರ ವಿರುದ್ಧ ಹೋರಾಟ ಮಾಡಲಾಗುವುದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ. ಶಿವಮೊಗ್ಗದಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಡಾದಲ್ಲಿ ಎ ಷ್ಟು ಕೋಟಿ ಹಗರಣ ನಡೆದಿದೆ ಎನ್ನುವುದನ್ನು ಈಗಾಗಲೇ ಜಾರಿ ನಿರ್ದೇಶನಾಲಯ ಮಾಧ್ಯಮಗಳಿಗೆ ಮಾಹಿತಿ ನೀಡಿದೆ. ಮತ್ತೊಂದೆಡೆ ರಾಜ್ಯ ಹೈಕೋರ್ಟ್ ಮುಡಾ ಹಗರಣವನ್ನು ಎಳೆಎಳೆಯಾಗಿ ಬಿಚ್ಚಿಟ್ಟಿದೆ. ಇಂಥ ಸಂದರ್ಭದಲ್ಲಿ ಮುಖ್ಯಮಂತ್ರಿಗೆ ಕ್ಲೀನ್ ಚಿಟ್ ನೀಡಿ ವರದಿ ನೀಡಿದ್ದು ಸತ್ಯವಾದಲ್ಲಿ ಅದಕ್ಕೆ ಯಾವುದೇ ಪಾವಿತ್ರ್ಯತೆ ಇರುವುದಿಲ್ಲ. ಎಂದು ವಿಜಯೀಂದ್ರ ಹೇಳಿದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ವಿದ್ಯಾರ್ಥಿಗಳಲ್ಲಿ ದೇಶಪ್ರೇಮ ಹಾಗೂ ದೇಶಭಕ್ತರ ಕುರಿತು ಅಭಿಮಾನ ಮೂಡಿಸುವ ಉದ್ದೇಶದಿಂದ ಕೇಂದ್ರ ಸರ್ಕಾರದ ರಕ್ಷಣಾ ಇಲಾಖೆಹಾಗೂ ಶಿಕ್ಷಣ ಇಲಾಖೆ ಆಯೋಜಿಸಿದ್ದ ವೀರಗಾಥಾ 4.0, ರಾ ್ಟ್ರ ಮಟ್ಟದ ಸ್ಪರ್ಧೆಯಲ್ಲಿ

ಹುಬ್ಬಳ್ಳಿಯ ಡಾಕ್ಟರ್ ಜಿ.ವಿ ಜೋಶಿ ರೋಟರಿ ಇಂಗ್ಲಿಷ್ ಮೀಡಿಯಂ ಹೈಸ್ಕೂಲಿನ, ಶಾಲಾ ವಿದ್ಯಾರ್ಥಿನಿ ಸೃಷ್ಟಿ ಶ್ರೀಕಾಂತ್ ವಡ್ಡರ್ ಪ್ರಶಸ್ತಿ ಪಡೆದಿದ್ದಾರೆ. ಝಾನ್ಸಿ ರಾಣಿ ಲಕ್ಷ್ಮೀ ಬಾಯಿ ಅವರ ಚಿತ್ರ ರಚಿಸುವ ಮೂಲಕ ಪ್ರಶಸ್ತಿ ಜಯಿಸಿ, ಗಣರಾಜ್ಯೋತ್ಸವದಂದು ರಾಷ್ಟ್ರಪತಿಯವರಿಂದ ಪ್ರಶಸ್ತಿ ಸ್ವೀಕರಿಸಲಿರುವ ಅವರು, ರಾಜ್ಯದಿಂದ ಆಯ್ಕೆಯಾಗಿರುವ 8 ವಿದ್ಯಾರ್ಥಿಗಳಲ್ಲಿ ಓಬ್ಬರಾಗಿದ್ದಾರೆ. ಪ್ರದೇಶ ಸಮಾಚಾರದೊಂದಿಗೆ ಸೃಷ್ಟಿ ತಮ್ಮ ಸಂತಸ ಹಂಚಿಕೊಂಡಿದ್ದಾರೆ...

ಧ್ವನಿ: ಸೃಷ್ಟಿ ಶ್ರೀಕಾಂತ್ ವಡ್ಡರ್–34 ಸೆಕೆಂದುಗಳು

*******

ರಾಜ್ಯದಲ್ಲಿ ವರ್ಷದಿಂದ ವರ್ಷಕ್ಕೆ ಶಾಲೆಯಿಂದ ಹೊರಗೆ ಉಳಿಯುತ್ತಿರುವ ಮಕ್ಕಳ ಸಂಖ್ಯೆ ಹೆಚ್ಚಾಗುತ್ತಿದ್ದು, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಇದನ್ನು ಗಂಭೀರವಾಗಿ ಪರಿಗಣಿಸಿದೆ ಎಂದು ಆಯೋಗದ ಸದಸ್ಯೆ ಅಪರ್ಣ ಕೊಳ್ಳ ಹೇಳಿದ್ದಾರೆ. ದಾವಣಗೆರೆಯಲ್ಲಿ ನಿನ್ನೆ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮರಳಿ ಶಾಲೆಗೆ ಕರೆತರುವ ಅಂದೋಲನ ಕುರಿತ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ದಾವಣಗೆರೆ ಜಿಲ್ಲೆಯಲ್ಲಿಯೇ 6 ಸಾವಿರದ 800 ಮಕ್ಕಳು ಶಾಲೆಯಿಂದ ಹೊರಗುಳಿದಿರುವ ಮಾಹಿತಿ ಇದೆ ಎಂದರು. ರಾಜ್ಯದ ಪ್ರತಿ ಜಿಲ್ಲೆಯಲ್ಲಿಯೂ ಶಾಲೆಯಿಂದ ಹೊರಗುಳಿದಿರುವ ಮಕ್ಕಳ ನಿಖರ ಅಂಕಿ ಅಂಶಗಳನ್ನು ಆಯೋಗ ಕಲೆ ಹಾಕುತ್ತಿದ್ದು, ಮಕ್ಕಳ ಶಿಕ್ಷಣ ಮತ್ತು ರಕ್ಷಣೆಗೆ ಸಂಬಂಧಿಸಿದಂತೆ 6 ಇಲಾಖೆಗಳು ಕೆಲಸ ಮಾಡುತ್ತಿದ್ದರೂ ಸಮಸ್ಯೆಗಳು ಮಾತ್ರ ಹೆಚ್ಚಾಗುತ್ತಿರುವುದು ಆತಂಕಕಾರಿ ಎಂದು ಅವರು ಹೇಳಿದರು.

*******

ಶಾಲೆಗಳು ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಪೂರ್ಣ ಸುರಕ್ಷೆ ಒದಗಿಸುವ ರಕ್ಷಣಾ ಕೇಂದ್ರಗಳಾಗಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ತಿಪ್ಪೇಸ್ವಾಮಿ ಕೆ.ಟಿ ಹೇಳಿದ್ದಾರೆ. ಕಾರವಾರದಲ್ಲಿ ಜಿಲ್ಲೆಯ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಆಯೋಜಿಸಿದ್ದ 'ಶಾಲೆಯಲ್ಲಿದೆ ಶಿಕ್ಷಣದ ಜೊತೆಗೆ ರಕ್ಷಣೆ' ಕಾರ್ಯಗಾರ ಉದ್ಘಾಟಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಮಕ್ಕಳ ಮೇಲೆ ದೌರ್ಜನ್ಯ ಪ್ರಕರಣಗಳು, ಸೂಕ್ತ ರಕ್ಷಣೆಯಿಲ್ಲದೇ ಶಾಲಾ ಆವರಣದಲ್ಲಿ ಅಸಹಜ ಸಾವುಗಳು ಸಂಭವಿಸುತ್ತಿವೆ. ಶಾಲೆಯಲ್ಲಿ ಮಕ್ಕಳ ರಕ್ಷಣೆಗೆ ಅಗತ್ಯವಿರುವ ಸಂಪೂರ್ಣ ಸುರಕ್ಷತಾ ಕ್ರಮಗಳನ್ನು ಅಳವಡಿಸಬೇಕು ಎಂದು ಸಲಹೆ ನೀಡಿದರು. ಫೆಬ್ರವರಿ ಅಂತ್ಯದೊಳಗೆ ಎಲ್ಲಾ ಶಾಲೆಗಳಲ್ಲಿ ಮಕ್ಕಳ ರಕ್ಷಣಾ ನೀತಿಯನ್ನು ಅಳವಡಿಸಿಕೊಂಡ ಕುರಿತು ಪ್ರಮಾಣ ಪತ್ರ ಸಲ್ಲಿಸಬೇಕು ಎಂದು ಅವರು ಸೂಚಿಸಿದರು.

*******

ಇದೇ 30 ರಂದು ಹುತಾತ್ಮರ ದಿನಾಚರಣೆಯನ್ನು ಮಡಿಕೇರಿಯಲ್ಲಿ ಶ್ರದ್ಧಾಭಕ್ತಿಯಿಂದ ಆಚರಿಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ತಿಳಿಸಿದ್ದಾರೆ. ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಚಿತಾಭಸ್ಮವನ್ನು ಜಿಲ್ಲಾ ಖಜಾನೆಯಿಂದ ತೆಗೆದುಕೊಂಡು ಮೆರವಣಿಗೆ ಮೂಲಕ ಗಾಂಧಿ ಮಂಟಪದಲ್ಲಿರಿಸಿ ಸರ್ವಧರ್ಮ ಪ್ರಾರ್ಥನೆ ಮೂಲಕ

ಹುತಾತ್ಮರ ದಿನಾಚರಣೆ ಆಚರಿಸಲಾಗುತ್ತದೆ ಎಂದರು. ದೇಶದ ಕೆಲವೇ ಕಡೆಗಳಲ್ಲಿ ಗಾಂಧೀಜಿಯವರ ಚಿತಾಭಸ್ಮದ ಸಂಗ್ರಹವಿದ್ದು ಮಡಿಕೇರಿಯಲ್ಲಿ ಕೂಡ ಇಂಥ ಚಿತಾಭಸ್ಮವಿದೆ. ಮುಂದಿನ ವ ರ್ಷದಿಂದ ನೂತನವಾಗಿ ನಿರ್ಮಾಣವಾಗುತ್ತಿರುವ ಗಾಂಧೀಜಿ ಸ್ಮಾರಕ ಸ್ಥಳಧಲ್ಲಿ ಚಿತಾಭಸ್ಮವನ್ನು ಸಾರ್ವಜನಿಕರ ವೀಕ್ಷಣೆಗೆ ಇರಿಸಲಾಗುವುದು. ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದರು.

*******

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

ಆಕಾಶವಾಣಿ ಮತ್ತು ದೂರದರ್ಶನ ಕೇಂದ್ರಗಳ ಉನ್ನತೀಕರಣಕ್ಕೆ ಕ್ರಮ–ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಡಾ.ಎಲ್.ಮುರುಗನ್.

ಸಾವಯವ ಉತ್ಪನ್ನಗಳ ಮಾರಾಟಕ್ಕೆ ಎಪಿಎಂಸಿಯಲ್ಲಿ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಲು ಚಿಂತನೆ–ಮುಖ್ಯಮಂತ್ರಿ ಸಿದ್ದರಾಮಯ್ಯ.

ಈ ವರ್ಷದ ಬೇಸಿಗೆಯಲ್ಲಿ, ರಾಜ್ಯದಲ್ಲಿ ಯಾವುದೇ ಲೋಡ್ ಶೆಡ್ಡಿಂಗ್ ಇಲ್ಲ– ಇಂಧನ ಸಚಿವ ಕೆ.ಜೆ.ಜಾರ್ಜ ಭರವಸೆ.

ಮೈಕ್ರೋ ಫೈನಾನ್ಸ್‌ಗಳನ್ನು ನಿಯಂತ್ರಿಸುವಲ್ಲಿ ರಾಜ್ಯ ಸರ್ಕಾರ ವಿಫಲ– ಮಾಜಿ ಮುಖ್ಯಮಂತ್ರಿ, ಬಸವರಾಜ ಬೊಮ್ಮಾಯಿ ಆರೋಪ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********